ಯಾರೂ ಬರುತ್ತಿಲ್ಲ. ಅಲ್ಲಿ ಒಂದು ಆಫೀಸ್ ಇಲ್ಲ. ರಿಗ್ ಯಂತ್ರಗಳು ಇಲ್ಲ. ಆದ್ದರಿಂದ ತಕ್ಷಣ ಒಂದು ಆಫೀಸ್ ಮಾಡಿ ಅಲ್ಲಿ ಒಂದು ವಾಹನ ಕೊಡಿ.

ಶ್ರೀ ಅಬ್ದುಲ್ ನಜೀರ್‌ಸಾಬ್.—ಇದು ಹೊಸ ಡಿವಿಸನ್ ಆದ್ದರಿಂದ ಸ್ವಲ್ಪ ತೊಂದರೆಯಾಗಿದೆ ಈ ತೊಂದರೆಯನ್ನು ಪರಿಹಾರ ಮಾಡುವುದಕ್ಕೆ ನಾನು ಪ್ರಯತ್ನ ಮಾಡುತ್ತೇನೆ.

## ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನಲ್ಲಿನ ನೀರಿನ ಸರಬರಾಜುಗಳ ಬಗ್ಗೆ

೫೧೯. ಶ್ರೀ ಎಸ್. ಹೆಚ್. ಕೌಜಲಗಿ (ಬೈಲಹೊಂಗಲ).—ಮಾನ್ಯ ಗ್ರಾಮೀಣ ಅಭಿವೃದ್ಧಿ ಪಂಚಾಯತ್ ರಾಜ್ ಮತ್ತು ವಕ್ಫ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನಲ್ಲಿ ವಾಹನ ಬಾಡಿಗೆ ಹಾಗೂ ಡಿಸೇಲ್ ಬಾಬ್ತು ಬಾಕಿ ಪಾವ್ತಿಮಾಡದಿರುವುದರಿಂದ ವಾಹನಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡುವುದು ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಹಣ ಬಿಡುಗಡೆ ಮಾಡಿ ನೀರು ಸರಬರಾಜು ಮಾಡಲು ಪುನಹ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ ?

ಶ್ರೀ ಅಬ್ದುಲ್ ನಜೀರ್ ಸಾಬ್ (ಗ್ರಾಮೀಣ ಅಭಿವೃದ್ಧಿ, ಪಂಚಾಯತ್ ರಾಜ್ ಮತ್ತು ವಕ್ಫ್ ಮಂತ್ರಿಗಳು).—

ಅ) ವಾಹನದಿಂದ ಸಾಗಣೆ ಮಾಡುತ್ತಿರುವ ನೀರು ಸರಬರಾಜು ನಿಲ್ಲಿಸಿಲ್ಲ.

ಆ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಶ್ರೀ ಎಸ್ ಹೆಚ್. ಕೌಜಲಗಿ.—ಮಾನ್ಯ ಅಧ್ಯಕ್ಷರೇ, ವಾಹನದ ಬಾಡಿಗೆ ಮತ್ತು ಡೀಸಲ್ ಬಿಲ್ ಕೊಡದೆ ಇರುವುದರಿಂದ ಕುಡಿಯುವ ನೀರಿನ ಸಾಗಾಣಿಕೆ ನಿಂತಿದೆ. ನೀರು ಸಾಗಾಣಿಕೆ ಮಾಡಿರುವ ಹಣವನ್ನು ಎಷ್ಟು ದಿನಗಳಲ್ಲಿ ಬಿಡುಗಡೆ ಮಾಡುತ್ತೀರಿ ಎಂದು ತಿಳಿಸಬೇಕು.

ಶ್ರೀ ಅಬ್ದುಲ್ ನಜೀರ್ ಸಾಬ್.—ಕುಡಿಯುವ ನೀರಿನ ಸಾಗಾಣಿಕೆ ನಿಂತಿದೆ ಎಂದು ಹೇಳಿದ್ದಾರೆ. ಅದರ ಬಾಬತ್ತಿನ ಹಣವನ್ನು ಕೂಡಲೇ ಬಿಡುಗಡೆ ಮಾಡುತ್ತೇನೆ.

ಶ್ರೀ ಎಸ್. ಹೆಚ್. ಕೌಜಲಗಿ.—ಎಷ್ಟು ದಿನದಲ್ಲಿ ಬಿಡುಗಡೆ ಮಾಡುತ್ತೀರಿ ?

ಶ್ರೀ ಅಬ್ದುಲ್ ನಜೀರ್ ಸಾಬ್.—ಒಂದು ವಾರದಲ್ಲಿ ಮಾಡಿಸುತ್ತೇನೆ.

## ಇಲಕಲ್ ಮತ್ತು ಹುನಗುಂದ ಪಟ್ಟಣಗಳಿಗೆ ಹಾಗೂ ಮಾರ್ಗದಲ್ಲಿನ ೧೨ ಹಳ್ಳಿಗಳಿಗೆ ಕುಡಿಯುವ ನೀರು ಸರಬರಾಜು ಮಾಡುವ ಸಮಗ್ರ ಯೋಜನೆಯ ಬಗ್ಗೆ.

೫೫೫. ಶ್ರೀ ಶಿವಸಂಗಪ್ಪ ಸಿದ್ದಪ್ಪ ಕಡಪಟ್ಟಿ (ಹುನಗುಂದ).—ಮಾನ್ಯ ನಗರಾಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹುನಗುಂದ ಇಲಕಲ್ ಹಾಗೂ ಹನ್ನೆರಡು ಸಮಸ್ಯಾತ್ಮಕ ಕುಡಿಯುವ ನೀರಿನ ಯೋಜನೆಯಲ್ಲಿ ಕೃಷ್ಣಾ ನದಿಯ ನೀರನ್ನು ಒದಗಿಸುವುದಾಗಿ ಭರವಸೆ ಕೊಟ್ಟಿದ್ದನ್ನು ಸರಕಾರದ ಗಮನಕ್ಕೆ ಬಂದಿದೆಯೆ ?

ಆ) ಹಾಗಿದ್ದಲ್ಲಿ ಸದರಿ ಕಾಮಗಾರಿಯು ಯಾವ ಹಂತದಲ್ಲಿದೆ ?

ಇ) ಸದರಿ ಸಮಸ್ಯಾತ್ಮಕ ಹಳ್ಳಿಗಳಿಗೆ ಕುಡಿಯುವ ನೀರಿನ ಬವಣೆಯನ್ನು ತಪ್ಪಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಶ್ರೀ ಎಂ. ಚಂದ್ರಶೇಖರ್ (ನಗರಾಭಿವೃದ್ಧಿ ಸಚಿವರು).—

ಅ) ಬಂದಿದೆ.

ಆ) ಈ ಯೋಜನೆಯ ವಿವರವಾದ ಅಂದಾಜು ಮತ್ತು ನಕ್ಷೆಗಳನ್ನು ತಯಾರಿಸಲಾಗುತ್ತಿದೆ. ಅಂದಾಜು ಸುಮಾರು ೫೫.೦೦ ಕೋಟಿ ರೂಪಾಯಿಗಳಾಗಬಹುದು.

ಇ) ಮೇಲಿನ ಯೋಜನೆಯನ್ನು ಕಾರ್ಯಗತ ಮಾಡಿದ ಮೇಲೆ ಪಟ್ಟಣಗಳಲ್ಲಿ ಮತ್ತು ಈ ಸಮಸ್ಯಾತ್ಮಕ ಹಳ್ಳಿಗಳ ನೀರಿನ ಸಮಸ್ಯೆ ಪರಿಹಾರವಾಗುತ್ತದೆ.

ಶ್ರೀ ಎಸ್. ಎಸ್. ಕಡಪಟ್ಟಿ.—ಸ್ವಾಮಿ, ಇಳಕಲ್ ಮತ್ತು ಹುನಗುಂದಗಳಿಗೆ ಸರಬರಾಜು ಮಾಡುತ್ತಿರುವ ಕುಡಿಯುವ ನೀರಿನಲ್ಲಿ ಫ್ಲೋರೈಡ್ ಕಂಟೆಂಟ್ ಇದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ? ಇದರ ಬಗ್ಗೆ ೧೯೮೪ ರಲ್ಲಿ ಕೊಟ್ಟ ಭರವಸೆ ಇಲ್ಲಿಯವರೆಗೂ ಕಾರ್ಯ ಪ್ರಾರಂಭ ಮಾಡಿಲ್ಲ. ಈ ಬಗ್ಗೆ ನಿಶ್ಚಿತವಾದ ಉತ್ತರ ಕೊಟ್ಟು ಯಾವಾಗ ಕಾರ್ಯವನ್ನು ಪ್ರಾರಂಭ ಮಾಡುತ್ತೀರಿ ಎಂಬುದನ್ನು ತಿಳಿಸಬೇಕು.

ಶ್ರೀ ಎಂ. ಚಂದ್ರಶೇಖರ್.—ಮಾನ್ಯ ಅಧ್ಯಕ್ಷರೇ, ಹುನಗುಂದ ಮತ್ತು ಇಳಕಲ್‌ಗಳಿಗೆ ಸಧ್ಯಕ್ಕೆ ಇಳಕಲ್ ನಾಲೆಯಿಂದ ನೀರನ್ನು ತೆಗೆದುಕೊಂಡು ಸರಬರಾಜು ಮಾಡಲಾಗುತ್ತಿದೆ. ಇದರ ಜೊತೆಗೆ ಕೊಳವೆ ಬಾವಿಗಳ ಮೂಲಕವೂ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಕೊಳವೆ ಬಾವಿಗಳ ಮೂಲಕ ಸರಬರಾಜು ಮಾಡುತ್ತಿರುವ ನೀರು ಉತ್ತಮವಲ್ಲವೆಂದು ಹೇಳಿರುವುದನ್ನು ನಾನು ಒಪ್ಪಿಕೊಳ್ಳುತ್ತೇನೆ. ಈ ಎರಡು ಪಟ್ಟಣಗಳಲ್ಲದೆ ಇನ್ನೂ ೧೨ ಹಳ್ಳಿಗಳಿಗೆ ಕುಡಿಯುವ ನೀರನ್ನು ಸರಬರಾಜು ಮಾಡುವುದಕ್ಕಾಗಿ ಒಂದು ಸಮಗ್ರವಾದಂಥ ಒಂದು ಯೋಜನೆ ಹಾಕಿಕೊಂಡು ಕೃಷ್ಣಾ ನದಿಯಿಂದ ಉಪಯೋಗ ಪಡೆಯಲಾಗುತ್ತದೆ. ಕೃಷ್ಣಾ ನದಿಯಿಂದ ನೀರು ಸರಬರಾಜು ಮಾಡುವುದಕ್ಕೆ ೫೫ ಕೋಟಿ ರೂಪಾಯಿಗಳು ತಗುಲಬಹುದು. ಈ ಯೋಜನೆಯನ್ನು ಮಾಡಿದರೆ ಅವರ ಸಮಸ್ಯೆ ಪರಿಹಾರವಾಗುತ್ತದೆ.

ಶ್ರೀ ಎಸ್. ಎಸ್. ಕಡಪಟ್ಟಿ.—ಫ್ಲೋರೈಡ್ ಕಂಟೆಂಟ್ ಇರುವುದರಿಂದ ಜನರ ಆರೋಗ್ಯಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಶ್ರೀ ಎಂ. ಚಂದ್ರಶೇಖರ್.—ಅದಕ್ಕಾಗಿಯೇ ಬೇರೆ ಕಡೆಯಿಂದ ನೀರು ಸರಬರಾಜು ಮಾಡುವುದಕ್ಕಾಗಿ ವಿವರವಾದಂಥ ಒಂದು ನಕ್ಷೆ ತಯಾರು ಮಾಡಲಾಗುತ್ತಿದೆ. ಅದಾದ ಕೂಡಲೇ ತೆಗೆದುಕೊಳ್ಳುತ್ತೇವೆ.

## ಭಾರತೀ ನಗರದ ಕ್ಷೇತ್ರದ ಕೊಳಚೆ ಪ್ರದೇಶಗಳ ಬಗ್ಗೆ

೮೦೯. ಶ್ರೀ ಕೆ. ಜೆ. ಜಾರ್ಜ್ (ಭಾರತೀನಗರ).— ಮಾನ್ಯ ನಗರಾಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

೧) ಭಾರತೀನಗರ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರದಿಂದ ಘೋಷಿತ ಕೊಳಚೆ ಪ್ರದೇಶಗಳ ಸಂಖ್ಯೆ ಮತ್ತು ಈ ಅಧಿಸೂಚನೆಗೆ ಎಷ್ಟು ಜನ ಭೂ ಮಾಲೀಕರಿಂದ ಉಚ್ಚ ನ್ಯಾಯಾಲಯದಿಂದ ತಡೆಯಾಜ್ಞೆ ತಂದಿರುತ್ತಾರೆ, ಯಾವ ದಿನಾಂಕದಿಂದ ?

ಶ್ರೀ ಎಂ. ಚಂದ್ರಶೇಖರ್ (ನಗರಾಭಿವೃದ್ಧಿ ಸಚಿವರು).—

೧) ಭಾರತೀನಗರ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು ೧೫ ಕೊಳಚೆ ಪ್ರದೇಶಗಳು ಸರ್ಕಾರದಿಂದ ಘೋಷಿತವಾಗಿದ್ದು ಇದರ ವಿವರ ಅನುಬಂಧ-೧ರಲ್ಲಿ ಕೊಡಲಾಗಿದೆ.

ಈ ಕೊಳಚೆ ಪ್ರದೇಶಗಳ ಪೈಕಿ ೩ ಕೊಳಚೆ ಪ್ರದೇಶಗಳ ೩ ಜನ ಭೂ ಮಾಲೀಕರಿಂದ ಉಚ್ಚ ನ್ಯಾಯಾಲಯದಿಂದ ತಡೆಯಾಜ್ಞೆ ಬಂದಿರುತ್ತದೆ. ಇದರ ವಿವರ ಅನುಬಂಧ-೨ರಲ್ಲಿ ಕೊಡಲಾಗಿದೆ.